ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2016-17 ದಿನಾಂಕ: 21-10-2016

# ಪತ್ರಿಕಾ ಆಮಂತ್ರಣ

1. ವ್ಯಂಗ ಚಿತ್ರಗಾರರ ಶಿಬಿರ:

   ಉದ್ಘಾಟನೆ: ಶ್ರೀಮತಿ ಜಿ. ರಶ್ಮಿ, ಜಂಟಿ ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ.

   ಅಧ್ಯಕ್ಷತೆ : ಹರೀಶ್ ಜೆ. ಪದ್ಮನಾಭ, ಉಪಾಧ್ಯಕ್ಷರು, ಕರ್ನಾಟಕ ಚಿತ್ರಕಲಾ ಪರಿಷತ್.

   ಮುಖ್ಯ ಅತಿಥಿ: ಹೆಚ್. ಜಯದೇವ್, ಹಿರಿಯ ಕಲಾವಿದರು.

   ದಿನಾಂಕ: 22–10–2016, ಶನಿವಾರ ಬೆಳಿಗ್ಗೆ 11–00 ಗಂಟೆಗೆ.

   ಸ್ಥಳ: ಕರ್ನಾಟಕ ಚಿತ್ರಕಲಾ ಪರಿಷತ್, ಕುಮಾರ ಕೃಪಾ ರಸ್ತೆ, ಬೆಂಗಳೂರು – 560 001.

2. ವಿಶ್ವ ಆಹಾರ ದಿನಾಚರಣೆ – 2016 ಆಚರಣೆ:

   ಉದ್ಘಾಟನೆ: ಪಾಂಡುರಂಗ ಬಿ. ನಾಯಕ್, ಆಯುಕ್ತರು, ಕೃಷಿ ಇಲಾಖೆ

   ದಿನಾಂಕ: 22–10–2016 ರ ಶನಿವಾರ ಬೆಳಿಗ್ಗೆ 11–00 ಗಂಟೆಗೆ.

   ಸ್ಥಳ: ಡಾ. ಹೆಚ್. ಆರ್. ಅರಕೇರಿ ಸಭಾಂಗಣ, ಕೃಷಿ ತಂತ್ರಜ್ಞರ ಸಂಸ್ಥೆ, ಕ್ವೀನ್ಸ್ ರಸ್ತೆ, ಬೆಂಗಳೂರು.

3. "13ನೇ ಕೃಷಿ ವಿಜ್ಞಾನ ಕಾಂಗ್ರೆಸ್' ಕುರಿತಂತೆ

   ಪತ್ರಿಕಾಗೋಷ್ಠಿ:

   ಡಾ.ಎಸ್. ಅಯ್ಯಪ್ಪನ್, ಮಹಾ ನಿರ್ದೇಶಕರು (ನಿವೃತ್ತ). ಭಾರತೀಯ ಕೃಷಿ ಅನುಸಂಧಾನ ಪರಿಷತ್, ಮತ್ತು ಅಧ್ಯಕ್ಷರು, ರಾಷ್ಟ್ರೀಯ ಕೃಷಿ ವಿಜ್ಞಾನಗಳ ಅಕಾಡೆಮಿ, ನವದೆಹಲಿ

   ಅಧ್ಯಕ್ಷತೆ: ಡಾ. ಹೆಚ್. ಶಿವಣ್ಣ, ಕುಲಪತಿಗಳು, ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು.

   ದಿನಾಂಕ: 22–10–2016, ಶನಿವಾರ ಮಧ್ಯಾಹ್ನ 12–30 ಗಂಟೆಗೆ.

   ಸ್ಥಳ: ಗಾಂಧಿ ಕೃಷಿ ವಿಜ್ಞಾನ ಕೇಂದ್ರ, (ಜಿ.ಕೆ.ವಿ.ಕೆ.) ಹೆಬ್ಬಾಳ, ಬೆಂಗಳೂರು.

   ಸೂಚನೆ: ಈ ಕಾರ್ಯಕ್ರಮಕ್ಕೆ ಪತ್ರಕರ್ತರನ್ನು ಕರೆದೊಯ್ಯಲು ವಾಹನ ವ್ಯವಸ್ಥೆ ಮಾಡಲಾಗಿದ್ದು , ವಾಹನವು ಅಂದು ಬೆಳಿಗ್ಗೆ 11–45 ಗಂಟೆಗೆ

ಕಬ್ಬನ್ ಪಾರ್ಕ್‌ನಲ್ಲಿರುವ ಪ್ರೆಸ್ ಕ್ಲಬ್ ಆವರಣದಿಂದ ಹೊರಡದಲಿ
ಸಂಪರ್ಕ: ಡಾ. ಕೆ. ಶಿವರಾಮು, ಪ್ರಾಧ್ಯಾಪಕರು ಹಾಗೂ ಹಿರಿಯ ವಾರ್ತಾತಜ್ಞರು,
ಮೊಬೈಲ್ ಸಂಖ್ಯೆ 9972035456.

4. 'ಕಲಾಸಂಧ್ಯಾ' ಡಾ. ಬಿ. ಜಯಶ್ರೀ ಮಾಜಿ ಸಂಸದರು ಮತ್ತು ರಂಗಕರ್ಮಿ ಅವರಿಂದ ರಂಗ ಗೀತೆ ಕಾರ್ಯಕ್ರಮ.

   ಮುಖ್ಯ ಅತಿಥಿ: ಡಾ. ಮುಖ್ಯಮಂತ್ರಿ ಚಂದ್ರು, ಮಾಜಿ ಅಧ್ಯಕ್ಷರು,
   ಕನ್ನಡ ಅಭಿವೃದ್ಧಿ ಪ್ರಾಧಿಕಾರ
   ಅಧ್ಯಕ್ಷತೆ: ಡಾ. ಬಿ.ಎಲ್. ಶಂಕರ್, ಅಧ್ಯಕ್ಷರು, ಕರ್ನಾಟಕ ಚಿತ್ರಕಲಾ ಪರಿಷತ್.
   ಉಪಸ್ಥಿತಿ: ಡಾ. ಡಿ.ಕೆ. ಚೌಟ, ಕೋಶಾಧ್ಯಕ್ಷರು, ಕರ್ನಾಟಕ ಚಿತ್ರಕಲಾ ಪರಿಷತ್.
   ದಿನಾಂಕ: 22-10-2016, ಶನಿವಾರ, ಸಂಜೆ 6-00 ಗಂಟೆಗೆ
   ಸ್ಥಳ: ಕರ್ನಾಟಕ ಚಿತ್ರಕಲಾ ಪರಿಷತ್, ಕುಮಾರಕೃಪಾ ರಸ್ತೆ, ಬೆಂಗಳೂರು – 560 001.

## ಪತ್ರಿಕಾ ಪ್ರಕಟಣೆ

## ದೀಪಾವಳಿ ಹಬ್ಬ : " ಪಟಾಕಿ ಸಿಡಿಸುವಾಗ ಮುನ್ನೆಚ್ಚರಿಕೆ ವಹಿಸಿ"

ಬೆಂಗಳೂರು, ಅಕ್ಟೋಬರ್ 21 (ಕರ್ನಾಟಕ ವಾರ್ತೆ)

2016 ನೇ ಸಾಲಿನಲ್ಲಿ ದೀಪಾವಳಿ ಹಬ್ಬವನ್ನು ಸುರಕ್ಷಿತವಾಗಿ ಆಚರಿಸುವ ದಿಸೆಯಲ್ಲಿ ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವಾ ಇಲಾಖೆಯು ಕೆಲವು ಮುನ್ನೆಚ್ಚರಿಕೆಯನ್ನು ತಿಳಿಸಿದ್ದು, ಅದನ್ನು ಪಾಲಿಸುವಂತೆ ಸೂಚಿಸಿದೆ.

* ಮಕ್ಕಳಿಗೆ ದೊಡ್ಡವರ ಸಮ್ಮುಖದಲ್ಲಿ ಪಟಾಕಿ ಹಚ್ಚಲು ತಿಳಿಸಬೇಕು.

* ತೆರೆದ ಪ್ರದೇಶದಲ್ಲಿ ಪಟಾಕಿ ಹಚ್ಚುವುದು ಸುರಕ್ಷಿತ. ಯಾವುದೇ ಸಂದರ್ಭದಲ್ಲಿ ಮನೆಯೊಳಗೆ ಪಟಾಕಿ ಹಚ್ಚಬಾರದು.

* ಆದಷ್ಟು ಮಟ್ಟಿಗೆ ಶರೀರಕ್ಕೆ ಹೊಂದಿಕೊಳ್ಳುವಂತಹ ಬಟ್ಟೆಗಳನ್ನು ಧರಿಸತಕ್ಕದ್ದು. ದೊಗಲೆ ಬಟ್ಟೆಗಳನ್ನು ಧರಿಸಬಾರದು.

* ಸುರ ಸುರ ಬತ್ತಿ ಇತ್ಯಾದಿಗಳನ್ನು ಶರೀರದಿಂದ ಆದಷ್ಟು ದೂರ ಹಿಡಿಯಬೇಕು.

* ಪಟಾಕಿ ಹಚ್ಚುವಾಗಿ ಅದರ ಮೇಲೆ ಬಾಗಬಾರದು.  ಸಾಧ್ಯವಾದಷ್ಟು ಮಟ್ಟಿಗೆ ಪಕ್ಕದಿಂದ ಹಚ್ಚತಕ್ಕದ್ದು.

* ಯಾವುದೇ ಪಾತ್ರೆಯೊಳಗೆ ಅಥವಾ ಇಕ್ಕಟಾದ ಸ್ಥಳದಲ್ಲಿ ಪಟಾಕಿ ಹಚ್ಚಬಾರದು.

* ಪಟಾಕಿಗಳನ್ನು ಜೇಬಿನಲ್ಲಿ ಇಡಬಾರದು.

* ಯಾವುದೇ ಸಂದರ್ಭದಲ್ಲಿ ಪಟಾಕಿಗಳನ್ನು ಬೆಂಕಿ ಅಥವಾ ಉಷ್ಣತೆ ಹೆಚ್ಚಿರುವ ಸ್ಥಳಗಳಲ್ಲಿ ಇಡಬಾರದು ಹಾಗೂ ಪೊಟ್ಟಣಗಳನ್ನು ತೆರೆಯಬಾರದು.

* ಹಚ್ಚಿರುವ ಪಟಾಕಿ ಸಿಡಿಯದಿಂದರೆ ಅದನ್ನು ಪುನರ್ ಪರೀಕ್ಷಿಸಲು ಪ್ರಯತ್ನಿಸಬಾರದು.

* ಹೂಕುಂಡಗಳನ್ನು ಕೈಯಲ್ಲಿ ಹಿಡಿದುಕೊಂಡು ಹಚ್ಚಬಾರದು.

* ರಾಕೆಟ್ ಬಳಸದಿರುವುದೇ ಉತ್ತಮ.

* ಬೇರೆಯವರಿಗೆ ತೋರಿಸಿಕೊಳ್ಳಲು ಪಟಾಕಿ ಹಚ್ಚುವಾಗ ಅಪಾಯಕ್ಕೆ ಅವಕಾಶ ಕೊಡಬಾರದು.

* ಪಟಾಕಿ ಹಚ್ಚುವಾಗ ಯಾವಾಗಲೂ ಪಕ್ಕದಲ್ಲಿ ನೀರನ್ನು ಇಟ್ಟುಕೊಳ್ಳುವುದು ಸುರಕ್ಷಿತ,  ಆಕಸ್ಮಿಕವಾಗಿ ಸುಟ್ಟಗಾಯಗಳಾದರೆ ಕೂಡಲೇ ತಣ್ಣೀರನ್ನು ಸುರಿಯತಕ್ಕದ್ದು.

* ಸಾಧ್ಯವಾದಷ್ಟು ಮಟ್ಟಿಗೆ ಸ್ನೇಹಿತರ ಜೊತೆ ಸೇರಿ ಸಾರ್ವಜನಕ ತೆರೆದ ಪ್ರದೇಶದಲ್ಲಿ ಪಟಾಕಿ ಹಚ್ಚುವುದು ಸೂಕ್ತ.  ಇದರಿಂದ ಎಲ್ಲರೂ ಸಂತೋಷ ಪಡಬಹುದು ಹಾಗೂ ಸುರಕ್ಷಿತ.

* ಪಟಾಕಿ ಹಚ್ಚುವಾಗ ಮಕ್ಕಳು, ವಯಸ್ಸಾದವರು, ಕಾಯಿಲೆ ಇರುವವರು ಹಾಗೂ ಪ್ರಾಣಿಗಳನ್ನು ಗಮನಿಸಿ,  ಇವರಿಗೆ ಆಗುವ ತೊಂದರೆಗಳನ್ನು ತಪ್ಪಿಸಲು ಪ್ರಯತ್ನಿಸಿ. ಸಾಧ್ಯವಾದಷ್ಟು ಮಟ್ಟಿಗೆ ಹೆಚ್ಚು ಶಬ್ಧಬರುವ ಪಟಾಕಿಗಳನ್ನು ಆಸ್ಪತ್ರೆ ಮತ್ತು ಇತರೆ ಸೂಕ್ಷ್ಮ ಪ್ರದೇಶಗಳಲ್ಲಿ ಬಳಸುವುದನ್ನು ತಪ್ಪಿಸುವುದು ಸೂಕ್ತವೆಂದು ಮಹಾ ನಿರ್ದೇಶಕರು, ಕರ್ನಾಟಕ ಅಗ್ನಿಶಾಮಕ ಮತ್ತು ತುರ್ತು ಸೇವೆಗಳು ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಹನಾ:ಜಿಪಿಆರ್.

# ಸಾರ್ವಜನಿಕ ಉದ್ದಿಮೆಗಳ ಪುನಶ್ಚೇತನಕ್ಕೆ ನೆರವು: ಸಚಿವ ಈಶ್ವರ ಖಂಡ್ರೆ

ಬೆಂಗಳೂರು, ಅಕ್ಟೋಬರ್ 21 (ಕರ್ನಾಟಕ ವಾರ್ತೆ)

ನಷ್ಟದಲ್ಲಿರುವ ಸಾರ್ವಜನಿಕ ಉದ್ದಿಮೆಗಳನ್ನು ಪುನಶ್ಚೇತನಗೊಳಿಸಲು ಬೇಕಾದ ಸಹಾಯ, ಸಹಕಾರ ನೀಡುವುದಲ್ಲದೆ ಅವುಗಳನ್ನು ಆರ್ಥಿಕವಾಗಿ ಸದೃಢಗೊಳಿಸಿ ಆದಾಯ ಹೆಚ್ಚಿಸಿ ಅಂತಹ ಉದ್ದಿಮೆಗಳನ್ನು ಮುಂಚೂಣಿಗೆ ತರುವ ಕಾರ್ಯ ತುರ್ತಾಗಿ ಆಗಬೇಕಾಗಿದೆ ಎಂದು ಪೌರಾಡಳಿತ ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವ ಈಶ್ವರ ಬಿ. ಖಂಡ್ರೆ ಹೇಳಿದರು.

ಇಂದು ಅವರು ನಗರದ ಸಾರ್ವಜನಿಕ ಉದ್ದಿಮೆಗಳ ಇಲಾಖೆ ಹಮ್ಮಿಕೊಂಡಿದ್ದ ಕರ್ನಾಟಕ ರಾಜ್ಯದ ಸಾರ್ವಜನಿಕ ಉದ್ದಿಮೆಗಳ ವ್ಯವಸ್ಥಾಪಕ ನಿರ್ದೇಶಕರ ಒಂದು ದಿನದ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

ಕರ್ನಾಟಕ ರಾಜ್ಯದಲ್ಲಿ ಒಟ್ಟು 60 ಸಾರ್ವಜನಿಕ ಉದ್ದಿಮೆಗಳಿದ್ದು ಅದರಲ್ಲಿ 46 ಸಂಸ್ಥೆಗಳು ಲಾಭದಲ್ಲಿದೆ. ಉಳಿದ 24 ಸಂಸ್ಥೆಗಳು ನಷ್ಟದಲ್ಲಿದ್ದು ಅವುಗಳ ಪುನಶ್ಚೇತನಕ್ಕಾಗಿ ಇಲಾಖೆ ಈ ಕಾರ್ಯಾಗಾರವನ್ನು ಹಮ್ಮಿಕೊಂಡಿದೆ. ಲಾಭದಲ್ಲಿರುವ ಸಂಸ್ಥೆಗಳಿಗೆ ಮತ್ತಷ್ಟು ಬಲತುಂಬುವ ಸಲಹೆಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಲಿದೆ ಎಂದು ಅವರು ತಿಳಿಸಿದರು.

ಖಾಸಗಿ ಉದ್ಯಮಗಳ ಪೈಪೋಟಿ ಮತ್ತು ಕಡಿಮೆ ಖರ್ಚಿನಲ್ಲಿ ಹೆಚ್ಚು ಉತ್ಪಾದನೆ ಮಾಡಬೇಕಾಗಿರುವ ಈ ಆಧುನಿಕ ಯುಗದಲ್ಲಿ ಸರ್ಕಾರಿ ಸಾರ್ವಜನಿಕ ಉದ್ದಿಮೆಗಳನ್ನು ಬೆಳೆಸುವುದರ ಮೂಲಕ ಹೆಚ್ಚಿನ ಉದ್ಯೋಗಾವಕಾಶಗಳನ್ನು ಸೃಷ್ಟಿಸುವ ಮತ್ತು ಸಾರ್ವಜನಿಕ ಸೇವೆಯನ್ನು ಗಮನದಲ್ಲಿಟ್ಟುಕೊಂಡು ಸರ್ಕಾರದ ಬೊಕ್ಕಸವನ್ನು ತುಂಬಿಸಲು ಇಲಾಖೆ ಸದಾ ಸನ್ನದವಾಗಿದೆ ಎಂದು ಹೇಳಿದರು.

ಸಾರ್ವಜನಿಕ ಉದ್ದಿಮೆಗಳ ಇಲಾಖೆಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಶ್ರೀಮತಿ ರೇಣುಕಾ ಚಿದಂಬರಂ ಅವರು ಮಾತನಾಡಿ ಸಾರ್ವಜನಿಕ ಉದ್ದಿಮೆಗಳ ವ್ಯವಸ್ಥಾಪಕ ನಿರ್ದೇಶಕರು ಹಾಗೂ ಹಿರಿಯ ಅಧಿಕಾರಿಗಳು ಇಲಾಖೆಯೊಂದಿಗೆ ಸಮನ್ವಯ ಕಾಯ್ದುಕೊಂಡು ಉತ್ಪಾದನೆ ಹೆಚ್ಚಿಸಬೇಕು ಹಾಗೂ ಒಟ್ಟು ಲಾಭಾಂಶದಲ್ಲಿ ಶೇಕಡ 20 ರಷ್ಟನ್ನು ಸರ್ಕಾರಕ್ಕೆ ಪ್ರತಿವರ್ಷ ನೀಡಬೇಕು ಎಂದು ಹೇಳಿದರು.

ಕಾರ್ಯಾಗಾರದಲ್ಲಿ ರಾಜ್ಯದ ಸಾರ್ವಜನಿಕ ಉದ್ದಿಮೆಗಳ ವ್ಯವಸ್ಥಾಪಕ ನಿರ್ದೇಶಕರು ಹಾಗೂ ಸರ್ಕಾರದ ಉನ್ನತ ಅಧಿಕಾರಿಗಳು ಭಾಗವಹಿಸಿದ್ದರು.

ಸಹನಾ:ಜಿಪಿಆರ್.

## ಪಾಲನಾ ವರದಿ ಸಲ್ಲಿಸಲು ವಿನಂತಿ

ಬೆಂಗಳೂರು, ಅಕ್ಟೋಬರ್ 21 (ಕರ್ನಾಟಕ ವಾರ್ತೆ)

ಅಲ್ಪಸಂಖ್ಯಾತರ ಇಲಾಖಾ ಕಾರ್ಯದರ್ಶಿಗಳು ಖಾತೆಗಾಗಿ ಅರ್ಜಿಗಳನ್ನು ಸಲ್ಲಿಸಲು ಕಟ್ಟುನಿಟ್ಟಿನ ನಿರ್ದೇಶನ ನೀಡಿ ಅಕ್ಟೋಬರ್ 28 ರೊಳಗೆ ಪೂರ್ಣಗೊಳಿಸಲು ಸೂಚಿಸಿದ್ದು, ಈ ಹಿನ್ನೆಲೆಯಲ್ಲಿ ರಾಜ್ಯದ ಎಲ್ಲಾ ಜಿಲ್ಲಾ ವಕ್ಫ್ ಸಲಹಾ ಸಮಿತಿಯ ಅಧ್ಯಕ್ಷರು, ಸದಸ್ಯರು, ಎಲ್ಲಾ ವಕ್ಫ್ ಸಂಸ್ಥೆಗಳ ಮುತವಲ್ಲಿಗಳು ಹಾಗೂ ಎಲ್ಲಾ ವಕ್ಫ್ ಸಿಬ್ಬಂದಿಯವರು ಈ ಕಾರ್ಯಕ್ರಮದಲ್ಲಿ ಸಮರೋಪಾವಧಿಯಲ್ಲಿ ಭಾಗವಹಿಸಿ ಅಕ್ಟೋಬರ್ 28 ರೊಳಗೆ ಎಲ್ಲಾ ಪ್ರಕಟಿತ ವಕ್ಫ್ ಆಸ್ತಿಗಳ ಖಾತೆಗೆ ಅರ್ಜಿ ಸಲ್ಲಿಸಿ ಪಾಲನಾ ವರದಿ ಸಲ್ಲಿಸುವಂತೆ ಪ್ರಾಥಮಿಕ ಪ್ರೌಢಶಿಕ್ಷಣ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವ ಶ್ರೀ ತನ್ವೀರ್ ಸೇಠ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ದಿನಾಂಕ 4-10-2016 ರಂದು ವಿಧಾನ ಸೌಧದ 3 ನೇ ಮಹಡಿ ಸಮಿತಿ ಕೊಠಡಿಯಲ್ಲಿ ಕಂದಾಯ ಸಚಿವರು ಮತ್ತು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರ ಜಂಟಿ ಸಭೆಯಲ್ಲಿ ಅಲ್ಪಸಂಖ್ಯಾತರ ಮತ್ತು ಕಂದಾಯ ಇಲಾಖೆಯ ಹಿರಿಯ ಅಧಿಕಾರಿಗಳೊಂದಿಗೆ ವಕ್ಫ್ ಆಸ್ತಿಗಳ ಖಾತೆ ಆಗದೇ ಇರುವ ಬಗ್ಗೆ ಕೂಲಂಕಶ ಚರ್ಚೆ ನಡೆದು ಕಂದಾಯ ಸಚಿವರು ರಾಜ್ಯಾದ್ಯಂತ ವಕ್ಫ್ ಕೃಷಿ ಜಮೀನುಗಳ ರಾಜ್ಯಪತ್ರದಲ್ಲಿ ಪ್ರಕಟಿಸಲಾಗಿದ್ದರೂ ಕಂದಾಯ ದಾಖಲೆಗಳಲ್ಲಿ ಖಾತೆ ಆಗದೇ ಇರುವುದನ್ನು ಗಮನಿಸಿ ಕಂದಾಯ ಇಲಾಖಾ ಅಧಿಕಾರಿಗಳಿಗೆ ಈ ಸಂಬಂಧ ಕೃಷಿ ವಕ್ಫ್ ಜಮೀನುಗಳ ರಾಜ್ಯಪತ್ರದಲ್ಲಿ ಪ್ರಕಟಿಸಲಾಗಿರುವಂತಹ ಪ್ರತಿಯನ್ನು ಲಗತ್ತಿಸಿ ಸಂಬಂಧಪಟ್ಟ ವಕ್ಫ್ ಸಂಸ್ಥೆ ಅಥವಾ ವಕ್ಫ್ ಅಧಿಕಾರಿಗಳು ಮನವಿ ಸಲ್ಲಿಸಿದ್ದಲ್ಲಿ, ಇದರ ಆಧಾರ ಕಂದಾಯ ಅಧಿಕಾರಿಗಳು ಕೂಡಲೇ ಖಾತೆ ಅನುಮೋದಿಸಲು ಸುತ್ತೋಲೆಯ ಮೂಲಕ ನಿರ್ದೇಶನ ನೀಡಲು ಸೂಚಿಸಿರುತ್ತಾರೆ.

ಈ ಹಿನ್ನೆಲೆಯಲ್ಲಿ ತುರ್ತಾಗಿ ವಕ್ಫ್ ಆಸ್ತಿಗಳ ಖಾತೆಗಾಗಿ ಅರ್ಜಿ ಸಲ್ಲಿಸಿ ಅಗತ್ಯ ಕ್ರಮ ಕೈಗೊಳ್ಳುವಂತೆ ಸಚಿವರು ನಿರ್ದೇಶನ ನೀಡಿದ್ದಾರೆ.

ಸಹನಾ:ಜಿಪಿಆರ್.

# <u>ಕಬ್ಬನ್‌ಪಾರ್ಕ್‌ನಲ್ಲಿ ಈ ಭಾನುವಾರ</u>

**ಬೆಂಗಳೂರು ಅಕ್ಟೋಬರ್ 21 (ಕರ್ನಾಟಕ ವಾರ್ತೆ)**

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. ದಿನಾಂಕ:23-10-2016ರ ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಈ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1) ಬೆಳಿಗ್ಗೆ 06.00 ಗಂಟೆಯಿಂದ ಬೆಳಿಗ್ಗೆ 07.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಉದಯರಾಗ" ಎಂಬ ಶೀರ್ಷಿಕೆಯಡಿ ಶ್ರೀ. ಕಾತ್ಯರಾವ್ ಪಾಟೀಲ್ ಮತ್ತು ತಂಡ , ಆಳಂದ ತಾಲ್ಲೂಕು, ಗುಲ್ಬರ್ಗ ಜಿಲ್ಲೆ ರವರಿಂದ ಜನಪದ ಮತ್ತು ತತ್ವಪದ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ

2) ಸಂಜೆ 05.00 ಗಂಟೆಯಿಂದ ಸಂಜೆ 06.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಸಂಧ್ಯಾರಾಗ" ಎಂಬ ಶೀರ್ಷಿಕೆಯಡಿ ಶ್ರೀ. ಪಕೀರಪ್ಪ ನಾಗಪ್ಪ ತಳವಾರ , ಹಾವೇರಿ ಜಿಲ್ಲೆ ರವರಿಂದ ಜನಪದಗೀತೆ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

3) ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

4) ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

**<u>ಈ ಭಾನುವಾರದ ವಿಶೇಷ ಕಾರ್ಯಕ್ರಮಗಳು:</u>**

## I.ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ

- ಬೆಳಿಗ್ಗೆ 7.00 ಗಂಟೆಯಿಂದ 8.00 ಗಂಟೆಯವರೆಗೆ ಯೂನಿವರ್ಸ್ ಆರ್ಟ್ ಫೌಂಡೇಶನ್ ಸಂಸ್ಥೆಯ ಸಹಯೋಗದೊಂದಿಗೆ ಕುಮಾರಿ. ರಮ್ಯ ಸುರೇಶ್ ರವರಿಂದ ಭರತನಾಟ್ಯ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- ಬೆಳಿಗ್ಗೆ 8.00 ಗಂಟೆಯಿಂದ 9.00 ಗಂಟೆಯವರೆಗೆ ಶ್ರೀವಾಣಿ ವಿದ್ಯಾ ಕೇಂದ್ರ , ಬಸವೇಶ್ವರ ನಗರ , ಬೆಂಗಳೂರು ಶಾಲಾ ವಿದ್ಯಾರ್ಥಿಗಳಿಂದ ಹಿಂದುಸ್ತಾನಿ ಮತ್ತು ಕರ್ನಾಟಿಕ್ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- ಬೆಳಿಗ್ಗೆ 9.00 ಗಂಟೆಯಿಂದ 10.00 ಗಂಟೆಯವರೆಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಬಾಲಭವನ ಸೊಸೈಟಿ, ಬೆಂಗಳೂರು ರವರ ಸಹಯೋಗದೊಂದಿಗೆ ಹಂಸಧ್ವನಿ ಸಂಗೀತ ಶಾಲೆ, ಬೆಂಗಳೂರು ರವರ ಸಂಸ್ಥೆಯ ಕಲಾವಿದರಿಂದ ಸುಗಮ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

## II.ಸ್ಥಳ: ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಹತ್ತಿರ

- ಮೆ.ಅರ್ಜೂ ಮಿಸ್ತ್ರಿ , ಆರ್ಟ್ ಇನ್ ಟ್ರಾನ್ಸಿಸ್ಟ್ ಪ್ರಾಜೆಕ್ಟ್ , ಸೃಷ್ಟಿ ಸ್ಕೂಲ್ ಆಫ್ ಆರ್ಟ್ ಡಿಸೈನ್ ಅಂಡ್ ಟೆಕ್ನಾಲಜಿ , ಬೆಂಗಳೂರು ರವರಿಂದ 22 ಮತ್ತು 23–10–2016 (ಶನಿವಾರ ಮತ್ತು ಭಾನುವಾರ) ರಂದು " Festival of stories" ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.
- ಬೆಳಗ್ಗೆ 8.00 ರಿಂದ 9.00 ಗಂಟೆಯವರಿಗೆ ಜೈನ್ ಯೂನಿವರ್ಸಿಟಿ ವಿದ್ಯಾರ್ಥಿಗಳಿಂದ ಸಾಮಾಜಿಕ ವಿಷಯಗಳಾದ "Gender Equality: From the perspective of the transgender community" and "Suicide" ಬಗ್ಗೆ ಬೀದಿ ನಾಟಕದ ಮೂಲಕ ಜಾಗೃತಿ ಕಾರ್ಯಕ್ರಮ.
- ಬೆಳಿಗ್ಗೆ 7.00 ರಿಂದ ಬೆಳಿಗ್ಗೆ 10.00 ಗಂಟೆಯವರೆಗೆ ಯೋಗ ಪ್ರಾಣ ವಿದ್ಯಾ ಸಂಸ್ಥೆಯ Soham Healing Center, ಆರ್.ಟಿ. ನಗರ ಬೆಂಗಳೂರು ರವರ ವತಿಯಿಂದ ಪ್ರಾಣ ಚಿಕಿತ್ಸೆ ನೀಡುವ ಕಾರ್ಯಕ್ರಮವನ್ನು ಉಚಿತವಾಗಿ ಏರ್ಪಡಿಸಲಾಗಿದೆ.
- ಬೆಳಿಗ್ಗೆ 6.00 ಗಂಟೆಯಿಂದ ಮಧ್ಯಾಹ್ನ 12.00 ಗಂಟೆಯವರೆಗೆ ವಿದ್ಯಾರಣ್ಯ ಸಂಸ್ಥೆಯು ನಡೆಸುತ್ತಿರುವ ವೃದ್ಧಾಶ್ರಮ ಫಲಾನುಭವಿಗಳು ಉತ್ಪಾದಿಸಿದ ವಸ್ತುಗಳ ಪ್ರದರ್ಶನ ಮತ್ತು ಮಾರಾಟ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

## ಸ್ತ್ರೀಶಕ್ತಿ ಸಂಘದ ಮಹಿಳೆಯರು ಹಾಗೂ ಮಹಿಳಾ ಉದ್ದಿಮೆದಾರರು ಉತ್ಪಾದಿಸಿದ ಉತ್ಪನ್ನಗಳ ವಸ್ತು ಪ್ರದರ್ಶನ ಹಾಗೂ ಮಾರಾಟ ಮೇಳ

**ಬೆಂಗಳೂರು ಅಕ್ಟೋಬರ್ 21 (ಕರ್ನಾಟಕ ವಾರ್ತೆ)**

ಸ್ತ್ರೀಶಕ್ತಿ ಸಂಘಗಳು ಸಾಮಾಜಿಕ ಹಾಗೂ ಆರ್ಥಿಕವಾಗಿ ಸಬಲರಾಗಿ ನಾಯಕತ್ವ ಗುಣಗಳನ್ನು ಬೆಳೆಸಿಕೊಳ್ಳಬೇಕೆಂದು ಶ್ರೀಮತಿ ಉಮಾಶ್ರೀ, ಮಹಿಳಾ ಮತ್ತು ಅಭಿವೃದ್ಧಿ, ವಿಕಲಚೇತನರ ಹಾಗು ಹಿರಿಯ ನಾಗರೀಕರ ಸಬಲೀಕರಣ ಇಲಾಖೆ ಮತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು ತಿಳಿಸಿದರು.

**ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಸಹಯೋಗದಲ್ಲಿ** ಬೆಂಗಳೂರಿನ ಮಡಿವಾಳದಲ್ಲಿರುವ, ವಿಭಾಗೀಯ ಮಟ್ಟದ ಸ್ತ್ರೀಶಕ್ತಿ ತರಬೇತಿ ಕೇಂದ್ರದ ಆವರಣದಲ್ಲಿ ರಾಜ್ಯ ಮಟ್ಟದ ಸ್ತ್ರೀಶಕ್ತಿ ಸಂಘದ ಮಹಿಳೆಯರು ಹಾಗೂ ಮಹಿಳಾ ಉದ್ದಿಮೆದಾರರು ಉತ್ಪಾದಿಸಿದ ಉತ್ಪನ್ನಗಳ ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳವನ್ನು ಉದ್ಘಾಟಿಸಿ ಮಾತನಾಡಿದರು.

ಇಂದಿನಿಂದ ಮೂರು ದಿನಗಳ ಕಾಲ 23.10.2016 ರವರೆಗೆ ನಡೆಯಲಿದೆ. ಗುಣಮಟ್ಟ, ವಿಶೇಷತೆ ಹಾಗೂ ಮಾರುಕಟ್ಟೆಯ ಬೇಡಿಕೆಗೆ ಅನುಸಾರವಾಗಿ ಹೆಚ್ಚಿನ ಪ್ರಮಾಣದಲ್ಲಿ ಉತ್ಪನ್ನಗಳನ್ನು ಉತ್ಪಾದಿಸಬೇಕೆಂದು ತಿಳಿಸಿದರು.

ಮಹಿಳೆಯರು ತಾವು ಉತ್ಪಾದಿಸಿದ ಉತ್ಪನ್ನಗಳನ್ನು ಕೇವಲ ಸ್ಥಳೀಯವಾಗಿ ಮಾರುಕಟ್ಟೆ ಮಾಡುವುದಲ್ಲದೇ ಜಾಗತಿಕವಾಗಿ ಮಾರಾಟ ಮಾಡಲು ಆಧುನಿಕ ತಂತ್ರಜ್ಞಾನವನ್ನು ಉಪಯೋಗಿಸಿಕೊಳ್ಳಬೇಕು ಎಂದು ಸೂಚಿಸಿದರು.

ಉತ್ತರ ಕರ್ನಾಟಕ ಅದರಲ್ಲೂ ವಿಶೇಷವಾಗಿ ಹೈದರಬಾದ್ ಕರ್ನಾಟಕ ಭಾಗದ ಮಹಿಳೆಯರು ಅನೇಕ ರೀತಿಯ ಕೌಶಲ್ಯಭರಿತರಾಗಿದ್ದು, ಮಾರುಕಟ್ಟೆ ಅವಕಾಶಗಳಿಂದ ವಂಚಿತರಾಗಿರುವುದರಿಂದ ಅವರಿಗೆ ಹೆಚ್ಚಿನ ಅವಕಾಶಗಳನ್ನು ಕಲ್ಪಿಸುವ ಅವಶ್ಯಕತೆ ಇರುವುದಾಗಿ ತಿಳಿಸಿದರು.

ಈಗಾಗಲೇ ಯಶಸ್ವಿಯಾಗಿರುವ ಮಹಿಳಾ ಉದ್ದಿಮೆದಾರರು ಹಾಗೂ ಸ್ತ್ರೀಶಕ್ತಿ ಸಂಘಗಳು ಅವಕಾಶದಿಂದ ವಂಚಿತರಾಗಿರುವ ಮಹಿಳಾ ಉದ್ದಿಮೆದಾರರನ್ನು ಪ್ರೇರೇಪಿಸಿ ಅವರನ್ನು ತಮ್ಮ ಉದ್ದಿಮೆಗಳಲ್ಲಿ ತೊಡಗಿಸಿಕೊಂಡು ಸಹಾಯ ಹಸ್ತ ನೀಡಲು ತಿಳಿಸಿದರು.

ಮಹಿಳೆಯರು ತಾವು ಉತ್ಪಾದಿಸಿದ ವಸ್ತುಗಳನ್ನು ತಾವೇ ನೇರವಾಗಿ ಮಾರಾಟ ಮಾಡುವ ಮೂಲಕ ಮದ್ಯವರ್ತಿಗಳ ಹಾವಳಿಯನ್ನು ತಡೆದು ಹೆಚ್ಚಿನ ಲಾಭಾಂಶವನ್ನು ಗಳಿಸಬಹುದೆಂದು ತಿಳಿಸಿದರು. ಇದಕ್ಕಾಗಿ ಗುಂಪುಗಳನ್ನು ರಚಿಸಿಕೊಂಡು ಕೆಲಸಗಳ ಹಂಚಿಕೆಯಿಂದ ಸಮರ್ಪಕವಾಗಿ ಕೆಲಸಮಾಡಬಹುದೆಂದು ತಿಳಿಸಿದರು

ಇಲಾಖೆಯಲ್ಲಿ ಲಭ್ಯವಿರುವ ಯೋಜನೆಗಳ ಸೌಲಭ್ಯಗಳನ್ನು ಅವಶ್ಯಕತೆಯಿರುವ ಹೆಚ್ಚಿನ ಮಹಿಳೆಯರು ಬಳಸಿಕೊಂಡು ಆರ್ಥಿಕವಾಗಿ ಹಾಗೂ ಸಾಮಾಜಿಕವಾಗಿ ಸದೃಡರಾಗಲು ತಿಳಿಸಿದರು.

ಸರ್ಕಾರ ಸ್ತ್ರೀಶಕ್ತಿ ಸಂಘಗಳಿಗೆ ಈ ಹಿಂದೆ ನೀಡಲಾಗುತ್ತಿದ್ದ ರೂ.5000/- ಗಳ ಸುತ್ತು ನಿಧಿಯನ್ನು ಐದು ವರ್ಷದ ಅವಧಿಗೆ ವಿಸ್ತರಿಸಿ ಒಟ್ಟು ರೂ. 25000/-ಗಳ ಸುತ್ತು ನಿಧಿಯನ್ನು ನೀಡಲಾಗುತ್ತಿದೆ.

ಸ್ತ್ರೀಶಕ್ತಿ ಸಂಘಗಳಿಗೆ ಈ ಹಿಂದೆ ಶೇಕಡ 6 ರ ಬಡ್ಡಿ ದರದಲ್ಲಿ ನೀಡಲಾಗುತ್ತಿದ್ದ ರೂ.1.00 ಲಕ್ಷದ ಕಿರುಸಾಲವನ್ನು ಪ್ರಸ್ತುತ ಸರ್ಕಾರವು ಬಡ್ಡಿರಹಿತವಾಗಿ ರೂ. 2.00 ಲಕ್ಷಗಳಿಗೆ ಹೆಚ್ಚಿಸಿದೆ.

ಮಹಿಳಾ ಆಯೋಗದ ಮೂಲಕ ಮಹಿಳಾ ಕಲ್ಯಾಣ ಸಮಿತಿಗಳನ್ನು ರಚಿಸಿ ಮಹಿಳೆಯರಿಗೆ ಅಗತ್ಯವಿರುವ ಕಾನೂನು ಹಾಗೂ ಪೋಲೀಸ್ ನೆರವನ್ನು ನೀಡಲು ಸೂಕ್ತ ಮಾರ್ಗಸೂಚಿಯನ್ನು ಸಿದ್ಧಪಡಿಸಲು ತಿಳಿಸಿದರು.

ಪ್ರಸ್ತುತ ತಾಲ್ಲೂಕು ಮಟ್ಟದ ಸ್ತ್ರೀಶಕ್ತಿ ಒಕ್ಕೂಟಗಳು ಕ್ರಿಯಾಶೀಲವಾಗಿ ಕಾರ್ಯ ನಿರ್ವಹಿಸುತ್ತಿದ್ದು, ಅದರಂತೆ ಜಿಲ್ಲಾಮಟ್ಟದಲ್ಲೂ ಸಹ ಸ್ತ್ರೀಶಕ್ತಿ ಒಕ್ಕೂಟಗಳನ್ನು ರಚಿಸಲು ಆಯವ್ಯಯ ಭಾಷಣದಲ್ಲಿ ಘೋಷಣೆ ಮಾಡಲಾಗಿದ್ದು, ತಕ್ಷಣದಲ್ಲಿ ಎಲ್ಲಾ ಜಿಲ್ಲೆಗಳಲ್ಲೂ ಒಕ್ಕೂಟಗಳನ್ನು ರಚಿಸಲು ಹಾಗೂ ಅದರ ಮೂಲಕ ಮಹಿಳಾ ಉದ್ದಿಮೆದಾರರು ಉಪಯೋಗ ಪಡೆಯುವಂತೆ ತಿಳಿಸಿದರು.

ಕಾರ್ಯಕ್ರಮದಲ್ಲಿ ನಿರ್ದೇಶಕರು, **ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ, ಯೋಜನಾ** ನಿರ್ದೇಶಕರು ಸ್ತ್ರೀಶಕ್ತಿ ವಿಭಾಗ, ಪ್ರದಾನ ವ್ಯವಸ್ಥಾಪಕರು, ಕ.ರಾ.ಮ.ಅ.ನಿ, ಉಪನಿರ್ದೇಕರು ಬೆಂಗಳೂರು ನಗರ ಮತ್ತು ಬೆಂಗಳೂರು ಗ್ರಾಮಾಂತರ, ಇಲಾಖೆಯ ಎಲ್ಲಾ ಅಧಿಕಾರಿ ಸಿಬ್ಬಂದಿಯವರು, ರಾಜ್ಯದ ವಿವಿಧ ಜಿಲ್ಲೆಗಳಿಂದ ಆಗಮಿಸಿದ ಸ್ತ್ರೀಶಕ್ತಿ ಗುಂಪಿನ ಪ್ರತಿನಿಧಿಗಳು ಮತ್ತು ಮಹಿಳಾ ಉದ್ದಿಮೆದಾರರು ಹಾಜರಿದ್ದರು.

## "ಬೆಳ್ಳಿ ಸಿನಿಮಾ – ಬೆಳ್ಳಿ ಮಾತು"

**ಬೆಂಗಳೂರು ಅಕ್ಟೋಬರ್ 21 (ಕರ್ನಾಟಕ ವಾರ್ತೆ)**

**ಕರ್ನಾಟಕ ಚಲನಚಿತ್ರ ಅಕಾಡೆಮಿ ವತಿಯಿಂದ ಏರ್ಪಡಿಸುವ "ಬೆಳ್ಳಿ ಸಿನಿಮಾ – ಬೆಳ್ಳಿ ಮಾತು" ಕಾರ್ಯಕ್ರಮದಡಿ ದಿನಾಂಕ : 22.10.2016 ರಂದು ಶನಿವಾರ ಸಂಜೆ 4.00 ಗಂಟೆಗೆ ಚಾಮುಂಡೇಶ್ವರಿ ಸ್ಟುಡಿಯೋ, ಮಿಲ್ಲರ್ ರಸ್ತೆ, ಬೆಂಗಳೂರು ಇಲ್ಲಿ "ಕೆಂಪಮ್ಮನ ಕೋರ್ಟ್ ಕೇಸ್" ಸಿನಿಮಾ ಪ್ರದರ್ಶಿಸಲಾಗುವುದು ಎಂದು ಅಕಾಡೆಮಿ ರಿಜಿಸ್ಟ್ರಾರ್ ಹೆಚ್.ಬಿ. ದಿನೇಶ್ ತಿಳಿಸಿದ್ದಾರೆ.**